ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ    ದಿನಾಂಕ : DATE : 24/04/2019

ಉವಾ 24/4/19

# ಸುಳ್ಳು ಅಫಿಡವಿಟ್: ಸಿಎಂ ವಿರುದ್ಧ ದೂರು

**ಬೆಂಗಳೂರು:** ವಿಧಾನಸಭೆ ಚುನಾವಣೆ ವೇಳೆ ಚುನಾವಣಾ ಆಯೋಗಕ್ಕೆ ಸಲ್ಲಿಕೆ ಮಾಡಿರುವ ಪ್ರಮಾಣಪತ್ರದಲ್ಲಿ ಮುಖ್ಯಮಂತ್ರಿ ಸುಳ್ಳು ಮಾಹಿತಿ ನೀಡಿದ್ದಾರೆ ಎಂದು ಆರೋಪಿಸಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ದೂರು ಸಲ್ಲಿಕೆಯಾಗಿದೆ. 2018ರ ಮೇ ತಿಂಗಳಲ್ಲಿ ನಡೆದ ವಿಧಾನಸಭೆ ಚುನಾವಣೆ ವೇಳೆ ಚನ್ನಪಟ್ಟಣ ಹಾಗೂ ರಾಮನಗರ ಕ್ಷೇತ್ರದಿಂದ ಚುನಾಯಿತರಾಗಲು ಅಫಿಡವಿಟ್ ಸಲ್ಲಿಕೆ ವೇಳೆ ತಮ್ಮ ಪುತ್ರ ಸೇರಿದಂತೆ ತಮ್ಮ ಖಾಸಗಿ ಮಾಹಿತಿ ಯನ್ನು ಮುಖ್ಯಮಂತ್ರಿ ಕುಮಾರಸ್ವಾಮಿ ಮರೆಮಾಚಿದ್ದಾರೆ. ಹೀಗಾಗಿ ಕೇಸ್ ದಾಖಲಿಸಿಕೊಂಡು ವಿಚಾರಣೆ ನಡೆಸಬೇಕು ಎಂದು ಕೋರಿ ಎಂದು ವಿಶ್ವ ಕನ್ನಡ ಸಮಾಜ ಪ್ರಜ್ಞಾವಂತ ನಾಗರಿಕ ಸಮಿತಿ ಸಂಸ್ಥಾಪಕ ಎಸ್.ಆನಂದ್ ದೂರು ನೀಡಿದ್ದಾರೆ. ಈ ದೂರನ್ನು ವಿಚಾರಣೆಗೆ ಪುರಸ್ಕರಿಸಿರುವ ನ್ಯಾಯಾಲಯ, ಐಪಿಸಿ ಕಲಂ 181 ಸುಳ್ಳು ಮಾಹಿತಿ ಮೇಲೆ ಪ್ರಮಾಣವಚನ ಸ್ವೀಕಾರ ಮತ್ತು ಪ್ರಜಾಪ್ರತಿನಿ ಕಾಯ್ದೆ ಕಲಂ 125(ಎ) ಚುನಾವಣೆ ಅಫಿಡವಿಟ್‌ನಲ್ಲಿ ಸುಳ್ಳು ಮಾಹಿತಿ ನೀಡಿರುವ ಆರೋಪದ ಮೇರೆಗೆ ಪ್ರಕರಣ ದಾಖಲಿಸಿಕೊಂಡು ಮೇ 2ಕ್ಕೆ ವಿಚಾರಣೆ ಮುಂದೂಡಿದೆ.

2